ಕರ್ನಾಟಕ ಸರಕಾರ
ವಾರ್ತಾ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 09-10-2014

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಬೆಳಗಾವಿ ಗಡಿ ವಿವಾದ ಕುರಿತು ಸರ್ವೋಚ್ಚ ನ್ಯಾಯಾಲಯದಿಂದ ಸಮಿತಿ ರಚನೆಯಾಗಿರುವ ಕುರಿತು ಹಿರಿಯ ಸಾಹಿತಿಗಳು, ಕಾನೂನು ತಜ್ಞರು ಹಾಗೂ ಕನ್ನಡ ಪರ ಹೋರಾಟಗಾರರೊಂದಿಗೆ ಮುಖ್ಯಮಂತ್ರಿಗಳ ಸಭೆ<br>***ವಿಶೇಷ ಸೂಚನೆ:***<br>ಈ ಸಭೆಯ ಪ್ರಾರಂಭದ ಮೊದಲ ಮೂರು ನಿಮಿಷ ಮಾತ್ರ ಪತ್ರಿಕಾ ಛಾಯಾಗ್ರಾಹಕರು ಹಾಗೂ ವಿದ್ಯುನ್ಮಾನ ಮಾಧ್ಯಮದ ಕ್ಯಾಮೆರಾಮನ್‌ಗಳಿಗೆ ಅವಕಾಶ ಕಲ್ಪಿಸಿದೆ | 10-10-2014<br>ಶುಕ್ರವಾರ<br>ಬೆಳಗ್ಗೆ<br>11-00 ಗಂಟೆಗೆ | ಕೊಠಡಿ ಸಂಖ್ಯೆ 334,<br>ಸಮ್ಮೇಳನ ಸಭಾಂಗಣ,<br>ವಿಧಾನ ಸೌಧ,<br>ಬೆಂಗಳೂರು |
| **2** | **Visual Archives of Kulwant Roy Photography Exhibition**<br>**Inauguration:** | **10-10-2014**<br>**Friday**<br>**at**<br>**6-.00 p.m.** | **National Gallery of Modern Art**<br>**Manikyavelu Mansion**<br>**49, Palace Road,**<br>**Bangalore** |

| | | | |
|---|---|---|---|
| | **Shri G.S. Rautela**<br>**Director General**<br>**National Council of Science Museums, Kolkata**<br><br>**Presided by:**<br>**Shri S.G. Vasudev**<br>**Eminent Artist** | | |

ನಿರ್ದೇಶಕರ ಪರವಾಗಿ

ಪತ್ರಿಕಾ ಪ್ರಕಟಣೆ

## ಆರು ದಿನಗಳ ಕೋಳಿ ಸಾಕಾಣಿಕಾ ತರಬೇತಿ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

ರಾಜ್ಯ ಕೋಳಿ ಸಂವರ್ಧನಾ ಮತ್ತು ತರಬೇತಿ ಕೇಂದ್ರ, ಹೆಸರಘಟ್ಟ, ಬೆಂಗಳೂರು - 560 009 ಇಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖಾವತಿಯಿಂದ ಅಕ್ಟೋಬರ್ 13 ರಿಂದ 18 ರವರೆಗೆ 6 ದಿನಗಳ ಕೋಳಿ ಸಾಕಾಣಿಕೆಯ ತರಬೇತಿಯನ್ನು ಏರ್ಪಡಿಸಲಾಗಿದೆ. ಆಸಕ್ತರು ಈ ತರಬೇತಿಗೆ ಹಾಜರಾಗಬಹುದಾಗಿದೆ. ತರಬೇತಿ ಅವಧಿಯಲ್ಲಿ ಪ್ರೋತ್ಸಾಹಧನವಾಗಿ ಪ್ರತಿ ಒಂದು ದಿನಕ್ಕೆ 150 ರೂ. ಗಳಂತೆ 6 ದಿನಕ್ಕೆ ಒಟ್ಟು ರೂ. 900 ಗಳನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080– 28466093 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಹೆಸರಘಟ್ಟದ ರಾಷ್ಟ್ರೀಯ ಸಂಯೋಜಿನ ಕುಕ್ಕುಟ ತಳಿವರ್ಧನಾ ಯೋಜನೆ ರಾಜ್ಯ ಕುಕ್ಕುಟ ಕ್ಷೇತ್ರ ಪ್ರಕಟಣೆಯಲ್ಲಿ ತಿಳಿಸಿದೆ.

ಕವನ:ಜಿಪಿಆರ್.

# SIX DAYS POULTRY TRAINING

**Bangalore, 9th October (Karnataka Information)**

**The State Poultry Breeding and Training Centre, Hesaraghatta, Bangalore - 560 089, Under the Department of Animal Husbandry & Veterinary Services, has organized 06 days Poultry Training Programme, from 13/10-2014 to 16-10-2014.**

**Interested persons may attend the Training Programme at Hesaraghatta. During the Training period incentive (Rs 150/- Per day) will be given to the trainees as per rules. For more details contact. Phone No. 080-28466093.**

**ಕವನ:ಜಿಪಿಆರ್**

# ಅಭ್ಯರ್ಥಿಗಳ ಮಾಹಿತಿಗಾಗಿ ಕೀ ಉತ್ತರ ವೆಬ್‌ಸೈಟ್‌ನಲ್ಲಿ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗ ವಾರ್ತಾ ಇಲಾಖೆಯಲ್ಲಿ 5 ಹಿರಿಯ ಸಹಾಯಕ ನಿರ್ದೇಶಕರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 28–9–2014 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿದ್ದು, ಸದರಿ ಪರೀಕ್ಷೆಯ ಸಾಮಾನ್ಯ ಅಧ್ಯಯನ (ಪತ್ರಿಕೆ–1) ನಿರ್ದಿಷ್ಟ ಪತ್ರಿಕೆ (ಪತ್ರಿಕೆ–2) ಗಳ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ http://kpsc.kar.nic.in/Key Answers ನಲ್ಲಿ ಪ್ರಕಟಿಸಲಾಗಿದೆ.

ಕೀ ಉತ್ತರಗಳ ಕುರಿಂತೆ ಅಭ್ಯರ್ಥಿಗಳೂ ಆಕ್ಷೇಪಣೆಗಳು ಇದ್ದಲ್ಲಿ, ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ವಿಷಯ, ಪ್ರಶ್ನೆ ಪುಸ್ತಿಕೆಯ ಶ್ರೇಣಿ ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಣೆಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50 ರ ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) "ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು" ಇವರಿಗೆ ನಿಗದಿಪಡಿಸಿರುವ ನಮೂನೆಯಲ್ಲಿ ದಿನಾಂಕ 17–10–2014 ರೊಳಗಾಗಿ ಲಿಖಿತ ಮನವಿಯ ಮೂಲಕ (ದ್ವಿ ಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕ ಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಕವನ:ಜಿಪಿಆರ್.

# ಅಕ್ಟೋಬರ್ 10 ರಂದು
# ವಾಣಿಜ್ಯ ಪರೀಕ್ಷಾ ಫಲಿತಾಂಶ ಪ್ರಕಟ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

2014 ನೇ ಜುಲೈ ಮಾಹೆಯಲ್ಲಿ ನಡೆದ ವಾಣಿಜ್ಯ ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗಳಿಗೆ ಸ್ಪೀಡ್ ಪೋಸ್ಟ್ ಮೂಲಕ ಮೂಲಕ ಕಳುಹಿಸಿಕೊಡಲಾಗಿದೆ. ಸಂಸ್ಥೆಯ ಮುಖ್ಯಸ್ಥರು ಅಕ್ಟೋಬರ್ 10 ರಂದು ಬೆಳಿಗ್ಗೆ 11.00 ಗಂಟೆಗೆ ತಮ್ಮ ಸಂಸ್ಥೆಗಳಲ್ಲಿ ಫಲಿತಾಂಶವನ್ನು ಪ್ರಕಟಿಸುವಂತೆ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ

ಕವನ:ಜಿಪಿಆರ್.

# ಕೋಲ್ಕತ್ತಾ ರಾಜಾರಾಂ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ
# ವತಿಯಿಂದ ಉಚಿತ ಧನಸಹಾಯಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

2014–15 ನೇ ಸಾಲಿಗೆ ರಾಜಾರಾಂ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ, ಕೋಲ್ಕತ್ತಾ ಇವರಿಂದ ಹೊಂದಾಣಿಕೇತರ ನೆರವು ಧನ ಸಹಾಯ ಯೋಜನೆಯಡಿಯಲ್ಲಿ ರಾಜ್ಯದ ಸಾರ್ವಜನಿಕರಿಗೆ ಉಚಿತ ಗ್ರಂಥಾಲಯ ಸೇವೆ ಒದಗಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳು ಪ್ರತಿಷ್ಠಾನದಿಂದ ಧನ ಸಹಾಯ ನೆರವು ಪಡೆಯಲು ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿ ನಮೂನೆಯನ್ನು ಉಪ ನಿರ್ದೇಶಕರು/ಮುಖ್ಯ ಗ್ರಂಥಾಲಯಾಧಿಕಾರಿಗಳು, ಜಿಲ್ಲಾ, ಕೇಂದ್ರ ಗ್ರಂಥಾಲಯ ಇಲ್ಲಿ ದಿನಾಂಕ 31–10–2014 ರೊಳಗಾಗಿ ಪಡೆದು ಭರ್ತಿಮಾಡಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಸಾರ್ವಜನಿಕರಿಗೆ ಉಚಿತ ಗ್ರಂಥಾಲಯ ಸೇವೆ ನೀಡಿ ಸಾಮಾಜಿ/ಗ್ರಂಥಾಲಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳಿಗೆ ಪ್ರತಿಷ್ಠಾನದ ನೆರವು ಧನ ಸಹಾಯ ಯೋಜನೆಯಿಂದ ಪುಸ್ತಕ, ಪೀಠೋಪಕರಣ ಹಾಗೂ ಗ್ರಂಥಾಲಯ ಸಲಕರಣೆಗಳನ್ನು ಖರೀದಿಸಲು ಮತ್ತು ಸದರಿ ಸಂಸ್ಥೆಗಳು ಗ್ರಂಥಾಲಯ ಉದ್ದೇಶಕ್ಕಾಗಿ ಉಚಿತ ನಿವೇಶನ ಹೊಂದಿದ್ದರೆ ಅದರ ಸಲುವಾಗಿ ಗ್ರಂಥಾಲಯ ಕಟ್ಟಡವನ್ನು ಅಭಿವೃದ್ಧಿಪಡಿಸಲು ಕೈಗೊಳ್ಳುವ ಹೆಚ್ಚುವರಿ ನಿರ್ಮಾಣಕ್ಕೆ ಸಂಬಂಧಿಸಿದಂಥೆ ಕಟ್ಟಡ ಕಾಮಗಾರಿಗಳಿಗೆ ಧನ ಸಹಾಯಕ ಮಾಡುವುದು ಯೋಜನೆಯ ಉದ್ದೇಶವಾಗಿದೆ.

ಅರ್ಹ ಸ್ವಯಂ ಸೇವಾ ಸಂಘ ಸಂಸ್ಥೆಗಳು ಸಂಬಂಧಪಟ್ಟ ಆಯಾಯ ಜಿಲ್ಲೆಗಳ ಉಪ ನಿರ್ದೇಶಕರು/ಮುಖ್ಯ ಗ್ರಂಥಾಲಯಾಧಿಕಾರಿಗಳು, ಜಿಲ್ಲಾ ಕೇಂದ್ರ ಗ್ರಂಥಾಲಯ ಇವರಿಂದ ನಿಗದಿ ಅರ್ಜಿ ನಮೂನೆಯನ್ನು ಪಡೆದು ನಮೂನೆಯ ಎಲಾ ಭಾಗ/ಅಂಶಗಳನ್ನು ಕಡ್ಡಾಯವಾಗಿ ಭರ್ತಿಮಾಡಿ ದಿನಾಂಕ 31–10–2014 ರೊಳಗಾಗಿ ಆಯಾಯ ಜಿಲ್ಲಾ ಕೇಂದ್ರ ಗ್ರಂಥಾಲಯಗಳ ಉಪ ನಿರ್ದೇಶಕರು/ಮುಖ್ಯಗ್ರಂಥಾಲಯಾಧಿಕಾರಿಗಳಿಗೆ ಸಲ್ಲಿಸಬೇಕು. ಹಾಗೂ ಧನ ಸಹಾಯ ನೆರವಿಗಾಗಿ ಅರ್ಜಿ ಸಲ್ಲಿಸುವ ಸಂಘ ಸಂಸ್ಥೆಗಳು ಅರ್ಜಿ ನಮೂನೆಯಲ್ಲಿ ಕಡ್ಡಾಯವಾಗಿ ಎಲ್ಲ ವಿವರಗಳನ್ನು ಭರ್ತಿ ಮಾಡಬೇಕು. ಈ ಯೋಜನೆಯ ಕೇಂದ್ರ ಸರ್ಕಾರದ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಿರುವುದರಿಂದ ಅರ್ಜಿಯನ್ನು ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಆಂಗ್ಲ ಭಾಷೆಯಲ್ಲಿ ಒದಗಿಸುವುದು ಕಡ್ಡಾಯವಾಗಿದೆ.

ಹೆಚ್ಚಿನ ವಿವರಗಳಿಗಾಗಿ ಸಂಬಂಧಪಟ್ಟ ಉಪ ನಿರ್ದೇಶಕರು / ಮುಖ್ಯಗ್ರಂಥಾಲಯಾಧಿಕಾರಿಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಸಾರ್ವಜನಿಕರ ಗ್ರಂಥಾಲಯ ಇಲಾಖೆ ಪ್ರಕಟಣೆ ತಿಳಿಸಿದೆ.

ಕವನ:ಜಿಪಿಆರ್.

## ಅಂಚೆ ಮೂಲಕ ಕನ್ನಡ ಶಿಕ್ಷಣಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ವತಿಯಿಂದ ಕನ್ನಡ ಬಾರದ ಸರ್ಕಾರಿ ನೌಕರರಿಗೆ ಮತ್ತು ಸಾರ್ವಜನಿಕರಿಗಾಗಿ ನವೆಂಬರ್ 1 ರಿಂದ ಹನ್ನೆರಡು ತಿಂಗಳುಗಳ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಯನ್ನು ಹಮ್ಮಿಕೊಂಡಿದೆ.

ಕರ್ನಾಟಕದಲ್ಲಿರುವ ಎಲ್ಲಾ ನಗರಸಭೆ, ಕ.ವಿ.ಪ್ರ.ನಿ.ನಿ. ಕೆ.ಎಸ್.ಆರ್.ಟಿ.ಸಿ. ವಿಶ್ವವಿದ್ಯಾಲಯಗಳು, ಶಾಲಾ ಕಾಲೇಜುಗಳು ಮತ್ತಿತರ ಸರ್ಕಾರಿ ಅನುದಾನ ಪಡೆಯುವ ಸಂಸ್ಥೆಗಳ ನೌಕರರು ಮತ್ತು ಎಲ್ಲಾ ರಾಷ್ಟ್ರೀಕೃತ ಬ್ಯಾಂಕುಗಳ ನೌಕರರು ಹಾಗೂ ಸಾರ್ವಜನಿಕರು ಅರ್ಜಿ ಸಲ್ಲಿಸಬಹುದು.

ಕರ್ನಾಟಕ ಸರ್ಕಾರಿ ನೌಕರರು ಸಂಪರ್ಕ ಶಿಬಿರ ಹಾಗೂ ಪರೀಕ್ಷೆಗಳಿಗೆ ಹಾಜರಾದಲ್ಲಿ ಅವರ ಕಚೇರಿ ಗೈರು ಹಾಜರಿಯನ್ನು ಅನ್ಯ ಕಾರ್ಯನಿಮಿತ್ತ ಎಂದು ಪರಿಗಣಿಸಲಾಗುವುದು. ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ನೋಂದಾಯಿಸಿಕೊಂಡು ಉತ್ತೀರ್ಣರಾದವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಕನ್ನಡ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುವುದು.

ಅರ್ಜಿಗಳನ್ನು ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನಾಂಕವಾಗಿದ್ದು, ಅರ್ಜಿ ನಮೂನೆ ಮತ್ತು ತರಬೇತಿ ವಿವರಗಳನ್ನು ಪ್ರಭಾರಿ, ಅಧಿಕಾರಿ, ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ, ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ಮಾನಸ ಗಂಗೋತ್ರಿ ಮೈಸೂರು - 570 006 ಇವರಿಗೆ ಐದು ರೂಪಾಯಿಯ ಅಂಚೆ ಚೀಟಿಯನ್ನು ಹಚ್ಚಿದ ಸ್ವವಿಳಾಸ ಲಕೋಟೆಯನ್ನು ಕಳುಹಿಸಿ ಪಡೆದುಕೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಕವನ:ಬಿಜಿಪಿ:ಜಿಪಿಆರ್.

## ಉಚಿತ ಹೊಲಿಗೆ ಯಂತ್ರ ನಿರ್ವಹಣಾ ತರಬೇತಿ

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

**ಕೈ ಮಗ್ಗ ಮತ್ತು ಜವಳಿ ಇಲಾಖೆಯ 2013–18 ರ ನೂತನ ಜವಳಿ ನೀತಿ ಯೋಜನೆಯಡಿ 5 ಲಕ್ಷ ಉದ್ಯೋಗವನ್ನು ಸೃಷ್ಟಿಸುವ ಉದ್ದೇಶದಡಿಯಲ್ಲಿ 5ನೇ ತರಗತಿ ವ್ಯಾಸಂಗ ಮಾಡಿದ 18 ರಿಂದ 35 ವರ್ಷ ವಯೋಮಾನದ ನಿರುದ್ಯೋಗಿ ಯುವಕ/ಯುವತಿಯರಿಗೆ 45 ದಿನಗಳಗಳ ಹೊಲಿಗೆ ಯಂತ್ರ ನಿರ್ವಹಣಾ ತರಬೇತಿಯನ್ನು ಉಚಿತವಾಗಿ ಬೆಂಗಳೂರಿನ ಸುತ್ತಮುತ್ತ ಇರುವ ಸಂಸ್ಥೆಗಳ ಮುಖಾಂತರ ನೀಡುವ ಜೊತೆಗೆ ಅರ್ಹ ಸಂಸ್ಥೆಗಳಲ್ಲಿ ಅಭ್ಯರ್ಥಿಗಳಿಗೆ ಉದ್ಯೋಗವನ್ನು ಕೊಡಿಸಲಾಗುವುದು.**

**45 ದಿನದ ತರಬೇತಿಯನ್ನು ಪಡೆದ ನಂತರ ತಿಂಗಳಿಗೆ 1500 ರೂ ಹಾಗೂ ಕೆಲಸಕ್ಕೆ ಸೇರಿದ 60 ದಿನಗಳ ಜಂತರ 1500 ರೂ ಗಳಂತೆ ಒಟ್ಟು ತಲಾ ಒಬ್ಬ ಅಭ್ಯರ್ಥಿಗೆ 3000 ರೂ ಶಿಷ್ಯ ವೇತನ ನೀಡಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗೆ ಕೈಮಗ್ಗ ಮತ್ತು ಜವಳಿ ಇಲಾಖೆಯ ದೂರವಾಣಿ ಸಂಖ್ಯೆ 080 - 22341176 ಅನ್ನು ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಪ್ರಕಟಣೆ ತಿಳಿಸಿದೆ.**

**ಕವನ:ಬಿಜಿಪಿ:ಜಿಪಿಆರ್**

## ಕೃಷಿ ಮೇಳ – 2014

**ಬೆಂಗಳೂರು, ಅಕ್ಟೋಬರ್ 09, (ಕರ್ನಾಟಕ ವಾರ್ತೆ)**

**ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಕರ್ನಾಟಕ ಸರ್ಕಾರದ ಕೃಷಿ ಇಲಾಖೆ ಮತ್ತು ಕರ್ನಾಟಕ ಸರ್ಕಾರದ ವಿವಿಧ ಅಭಿವೃದ್ಧಿ ಇಲಾಖೆಗಳ ಜೊತೆಗೂಡಿ ಕೃಷಿ ಮೇಳ - 2014 ಅನ್ನು ನವೆಂಬರ್ 19 ರಿಂದ 31 ರವರೆಗೆ ಮೂರು ದಿನಗಳ ಕಾಲ ಜಿ.ಕೆ.ವಿ.ಕೆ.ಯ ಕೃಷಿ ಮೈದಾನದಲ್ಲಿ ಹಮ್ಮಿಕೊಂಡಿದೆ.**

**ಈ ಕೃಷಿ ಮೇಳದಲ್ಲಿ ಕೃಷಿ ವಸ್ತು ಪ್ರದರ್ಶನದ ಜೊತೆಯಲ್ಲಿ ರಾಷ್ಟ್ರೀಯ ಸಾವಯವ ಕೃಷಿವಸ್ತು ಪ್ರದರ್ಶನ, ರಾಷ್ಟ್ರೀಯ ಕೃಷಿ ಯಂತ್ರೋಪಕರಣಗಳ ಪ್ರದರ್ಶನ ಹಾಗೂ ಆಹಾರ ಮತ್ತು ಮೌಲ್ಯವರ್ಧನೆಯ ಬಗ್ಗೆ ವಸ್ತು ಪ್ರದರ್ಶನ ಸಹ ಏರ್ಪಡಿಸಲಾಗಿದೆ. ವಿವಿಧ ಸರ್ಕಾರಿ ಸಂಸ್ಥೆಗಳು, ನಿಗಮ, ಸರ್ಕಾರೇತರ ಸಂಸ್ಥೆಗಳು, ಮಂಡಳಿಗಳು, ಕೃಷಿ ಪರಿಕರಗಳ ಉತ್ಪಾದಕರು ಮತ್ತು ಮಾರಾಟಗಾರರು, ಕೃಷಿ ಯಂತ್ರೋಪಕರಣಗಳ ತಯಾರಕರು ಹಾಗೂ ಮಾರಾಟಗಾರರು, ಹಣಕಾಸು ಸಂಸ್ಥೆಗಳು ಹಾಗೂ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿಗೆ ಪೂರಕವಾಗಿರುವ ಸಂಘ ಸಂಸ್ಥೆಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸಿ, ತಮ್ಮ ತಂತ್ರಜ್ಞಾನ /ಪರಿಕರಗಳು/ಸೇವಾ ಸೌಲಭ್ಯಗಳನ್ನು ಪ್ರದರ್ಶಿಸಲು ಇಚ್ಚಿಸುವವರು ದಿನಾಂಕ 5-11-2014 ರೊಳಗೆ ತಮ್ಮ ಮಳಿಗೆಗಳನ್ನು ಕಾದಿರಿಸಲು ಕೋರಿದೆ.**

**ಹೆಚ್ಚಿನ ಮಾಹಿತಿಗಾತಿ ವಿಸ್ತರಣಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು - 560 024 ಇವರನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 080 –2351 6353/080 –2341 8883 ಮೊಬೈಲ್ : 9986663132, ಫ್ಯಾಕ್ಸ್ :23516836.**

**ಕವನ:ಜಿಪಿಆರ್.**

## ಸಂತಾಪ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಹಿರಿಯ ಪತ್ರಿಕೋದ್ಯಮಿ ಎಂ.ವಿ. ಕಾಮತ್ ಅವರ ನಿಧನದಿಂದ ಸಾಹಿತ್ಯ ಹಾಗೂ ಪತ್ರಿಕಾ ಲೋಕ ಬಡವಾಗಿದ್ದು ಈ ಎರಡೂ ಕ್ಷೇತ್ರಗಳಲ್ಲಿ ಅವರ ಸೇವೆ ಅನುಪಮವಾದದ್ದು. ಅವರು ಪ್ರಸಾರಭಾರತಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು, ಹಲವಾರು ಪ್ರಶಸ್ತಿ ಮತ್ತು ಪುರಸ್ಕಾರಗಳಿಗೆ ಭಾಜನರಾಗಿರುತ್ತಾರೆ. ಇವರ ನಿಧನದಿಂದ ಸಾಹಿತ್ಯ ಮತ್ತು ಪತ್ರಿಕಾ ಲೋಕ ಕನ್ನಡ ಸಾರಸ್ವತ ಲೋಕ ಮತ್ತು ಕರ್ನಾಟಕ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಡಿ.ಹೆಚ್. ಶಂಕರಮೂರ್ತಿ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

**ಕವನ:ಕೆಎಂ**

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 9 (ಕರ್ನಾಟಕ ವಾರ್ತೆ)

ಇಂಧನ ಖಾತೆ ಸಚಿವ ಶ್ರೀ ಡಿ.ಕೆ. ಶಿವಕುಮಾರ್ ಅವರು ಅಕ್ಟೋಬರ್ 10 ಮತ್ತು 11 ರಂದು ಬೆಳಗಾವಿ, ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

**ಕವನ:ಕೆಎಂ**